<u>ದಿನಾಂಕಃ **17-02-2024** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಮಾಡಿಸಲಾಯಿತು.</u>

<u>ಮುಖ್ಯವಿಚಾರಣೆಃ ವಾದಿ ಪರ ವಕೀಲರಿಂದಃ</u>

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಸಾಕ್ಷ್ಯದ ಮುಖ್ಯವಿಚಾರಣೆಯಾಗಿ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ . ಪ್ರಮಾಣಪತ್ರದಲ್ಲಿ ಬರೆದಿರುವ ವಿಷಯಗಳು ನನಗೆ ತಿಳಿದಿದೆ ಮತ್ತು ಸತ್ಯವಾಗಿದೆ.

<u>ಪಾಟೀ ಸವಾಲುಃ ಪ್ರತಿವಾದಿ 1 ರಿಂದ 3 ಮತ್ತು 5 ರಿಂದ 7 -ಏನೂ ಇಲ್ಲ .</u>

<u>ಪಾಟೀ ಸವಾಲು - 4 ನೇ ಪ್ರತಿವಾದಿ ಪರ ಶ್ರೀ ಬಿ ಎಸ್ ಎನ್ ವಕೀಲರಿಂದಃ</u>

ನಾನು ಕೃಷಿ ಕೆಲಸ ಮಾಡಿಕೊಂಡಿದ್ದೇನೆ. ನನಗೆ ಈ ಕೇಸಿನಲ್ಲಿ ಸಾಕ್ಷಿ ನುಡಿಯಲು ನ್ಯಾಯಾಲಯದಿಂದ ಸಮನ್ಸ್ ಬಂದಿರುವುದಿಲ್ಲ. ನ್ಯಾಯಾಲಯದಲ್ಲಿ ಸಾಕ್ಷಿ ನುಡಿಯಬೇಕೆಂದು ನಮ್ಮ ವಕೀಲರು ಮನವಿ ಮಾಡಿಕೊಂಡಿರುತ್ತಾರೆ. ಈ ಕೇಸಿನ ವಿಚಾರ ನನಗೆ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ಯಾರು ತಿಳಿಸಿರುತ್ತಾರೆ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರ ಹಾಕುವ ಪೂರ್ವದಲ್ಲಿ ಕೇಸಿನ ಪಕ್ಷಗಾರರು ಯಾರು ಎಂದು ಗೊತ್ತಿಲ್ಲ. ಈ ಕೇಸು ಯಾವ ವಿಚಾರಕ್ಕಾಗಿ ನಡೆಯುತ್ತಿದೆ ಗೊತ್ತಿಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆಃ ಇಲ್ಲಃಃ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,
ಸಂಚಾರಿ ನ್ಯಾಯಾಲಯ, ಕೊಪ್ಪ.

ಸಾಕ್ಷಿದಾರರ ಸಹಿಃ